**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ದಾವಣಗೆರೆ ಜಿಲ್ಲೆ ಜಗಳೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸಮುದಾಯ ಭವನಗಳ ನಿರ್ಮಾಣಕ್ಕಾಗಿ ಅನುದಾನ ಮಂಜೂರು ಮಾಡುವ ಕುರಿತು.

**ಓದಲಾಗಿದೆ:** ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 687 ವೆಚ್ಚ-3/2022, ದಿನಾಂಕ:05.11.2022.

*****

**ಪ್ರಸ್ತಾವನೆ:**

ಮೇಲೆ ಓದಲಾದ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆಗೆ ಮಂಜೂರು ಮಾಡಿದ ರೂ.21.23 ಕೋಟಿ ಮೊತ್ತದಲ್ಲಿ ದಾವಣಗೆರೆ ಜಿಲ್ಲೆಯ ಜಗಳೂರು ವಿಧಾನಸಭಾ ಕ್ಷೇತ್ರದ 10 ಸಮುದಾಯ ಭವನಗಳ ನಿರ್ಮಾಣಕ್ಕೆ ರೂ.4.50 ಕೋಟಿ ಅನುದಾನವನ್ನು ಮರು ಹಂಚಿಕೆ ಮಾಡಲು ಮಾನ್ಯ ಮುಖ್ಯಮಂತ್ರಿಗಳು ಅನುಮೋದಿಸಿರುತ್ತಾರೆ. ಈ ಹಿನ್ನಲೆಯಲ್ಲಿ ದಾವಣಗೆರೆ ಜಿಲ್ಲೆಯ ಜಗಳೂರು ವಿಧಾನಸಭಾ ಕ್ಷೇತ್ರದ 10 ಸಮುದಾಯ ಭವನಗಳ ನಿರ್ಮಾಣಕ್ಕೆ ರೂ.4.50 ಕೋಟಿ ಅನುದಾನ ಬಿಡುಗಡೆ ಮಾಡುವಂತೆ ತಿಳಿಸಲಾಗಿರುತ್ತದೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 686 ಬಿಎಂಎಸ್ 2022**
**ಬೆಂಗಳೂರು, ದಿನಾಂಕ:-17.11.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ದಾವಣಗೆರೆ ಜಿಲ್ಲೆಯ ಜಗಳೂರು ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ 10 ಸಮುದಾಯ ಭವನಗಳ ನಿರ್ಮಾಣಕ್ಕೆ ರೂ.450.00 ಲಕ್ಷ (ನಾಲ್ಕು ನೂರ ಐವತ್ತು ಲಕ್ಷ ರೂಪಾಯಿಗಳು ಮಾತ್ರ)ಗಳ ಅನುದಾನದಲ್ಲಿ ಕಟ್ಟಡ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡಿ ಆದೇಶಿಸಿದೆ.

**ಷರತ್ತುಗಳು:**

1. ಸಹಮತಿಸಲಾದ ಅನುದಾನದ ಮಿತಿಯಲ್ಲಿಯೇ ಕಾಮಗಾರಿಗಳ ಅಂದಾಜನ್ನು ಪ್ರಚಲಿತ ದರಪಟ್ಟಿಯನ್ವಯ ತಯಾರಿಸತಕ್ಕದ್ದು. ಸದರಿ ಅಂದಾಜಿನಲ್ಲಿ ಸಹಮತಿಸಿದ ಅನುದಾನದ ಮಿತಿಯಲ್ಲಿಯೇ ಟೆಂಡರ್ ಪ್ರೀಮಿಯಂ ಸಹ ಒಳಗೊಂಡಿರತಕ್ಕದ್ದು, ಯಾವುದೇ ಕಾರಣಕ್ಕೂ ಅಂದಾಜಿನಲ್ಲಿ ನಿರ್ಣಾಯಕ ಐಟಂಗಳು ಕೈಬಿಡದಂತೆ ನೋಡಿಕೊಳ್ಳತಕ್ಕದ್ದು.

17/11/22 2..

2. ಪ್ರಸ್ತಾಪಿತ ಕಾಮಗಾರಿಗಳ ಅಂದಾಜನ್ನು ಪರಿಷ್ಕರಿಸುವುದನ್ನು ಕಡ್ಡಾಯವಾಗಿ ನಿರ್ಬಂಧಿಸಿದೆ.

3. ಆಡಳಿತಾತ್ಮಕ ಅನುಮೋದನೆಯನ್ನು 15 ದಿನಗಳೊಳಗಾಗಿ ನೀಡತಕ್ಕದ್ದು.

4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರು ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014 (ಭಾ-2) ದಿನಾಂಕ:05.11.2014 ಹಾಗೂ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 1133 ಬಿಎಂಎಸ್ 2017, ದಿನಾಂಕ: 29.11.2017ರ ಮಾರ್ಗಸೂಚಿಗಳನ್ನು ತಪ್ಪದೆ ಪಾಲಿಸತಕ್ಕದ್ದು, ಈ ಯೋಜನೆಯ ಮಾರ್ಗಸೂಚಿಗಳ ಪ್ರಕಾರ ನಿಯಮಾನುಸಾರ ಅಗತ್ಯವಾದ ಎಲ್ಲಾ ದಾಖಲೆಗಳನ್ನು ಪಡೆದು, ಪರಿಶೀಲಿಸಿ ಅನುದಾನವನ್ನು ಪಡೆಯಲು ಅರ್ಹತೆ ಇದ್ದಲ್ಲಿ ಮಾತ್ರ ಈ ಸಂಸ್ಥೆಗೆ ನಿಯಮಾನುಸಾರ ಹಾಗೂ ಅರ್ಹತೆಯನುಸಾರ ಅನುದಾನವನ್ನು ಹಂತ ಹಂತವಾಗಿ ಬಿಡುಗಡೆ ಮಾಡತಕ್ಕದ್ದು.

5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಅನುದಾನವನ್ನು ಕಟ್ಟಡ ಪ್ರಗತಿಗನುಗುಣವಾಗಿ ಹಂತ ಹಂತವಾಗಿ ಬಿಡುಗಡೆ ಮಾಡುವುದು ಹಾಗೂ ಬಿಡುಗಡೆ ಮಾಡಿದ ಮೊತ್ತಕ್ಕೆ ಹಣ ಬಳಕೆ ಪ್ರಮಾಣ ಪತ್ರವನ್ನು ನಿಯಮಾನುಸಾರ ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ ಇವರ ಮುಖಾಂತರ ಪಡೆಯತಕ್ಕದ್ದು.

6. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಸರ್ಕಾರದಿಂದ ನೀಡಲಾಗುತ್ತಿರುವ ಅನುದಾನವನ್ನು ಪಾರದರ್ಶಕವಾಗಿ ಹಾಗೂ ಮಾರ್ಗಸೂಚಿಗಳನುಸಾರ ಬಳಕೆಯಾಗುತ್ತಿರುವ ಬಗ್ಗೆ ಪರಿಶೀಲಿಸಲು ಪ್ರತಿ ತಿಂಗಳು ಆಯಾ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಇವರಿಂದ ನಿಗಧಿತ ನಮೂನೆಯಲ್ಲಿ ಭಾವಚಿತ್ರಗಳು ಹಾಗೂ ವರದಿಯನ್ನು ಪಡೆಯತಕ್ಕದ್ದು, ವರದಿಯ ಆಧಾರದಲ್ಲಿ ನಿಯಮಾನುಸಾರ ಅವಶ್ಯಕ ಕ್ರಮ ತೆಗೆದುಕೊಳ್ಳತಕ್ಕದ್ದು.

7. ಮಂಜೂರು ಮಾಡಲಾದ ಅನುದಾನವನ್ನು ಯಾವ ಉದ್ದೇಶಗಳಿಗೆ ನೀಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಅನ್ಯ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದಲ್ಲ.

8. ಮಂಜೂರಾದ ಅನುದಾನವನ್ನು 2 ವರ್ಷಗಳೊಳಗಾಗಿ ಕಾಮಗಾರಿಗೆ ವಿನಿಯೋಗಿಸದಿದ್ದಲ್ಲಿ, ಸದರಿ ಅನುದಾನವನ್ನು ದಂಡ ಸಮೇತವಾಗಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

9. ಮಂಜೂರು ಮಾಡಲಾದ ಅನುದಾನವನ್ನು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಖಜಾನೆ-2 ಮುಖಾಂತರ ಜಿಲ್ಲಾಧಿಕಾರಿಗಳ ಡಿಡಿಓ ಸಂಕೇತಕ್ಕೆ ಅಪ್ಲೋಡ್ ಮಾಡತಕ್ಕದ್ದು.

10. ಮಂಜೂರು ಮಾಡಲಾದ ಅನುದಾನದ ವಿವರಗಳನ್ನು ಒಳಗೊಂಡ ವೀಕ್ಷಣಾ ಪುಸ್ತಕ (Watch Register)ವನ್ನು ನಿರ್ವಹಿಸಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಪೂರ್ಣ ವಿವರಣಾಪಟ್ಟಿಯೊಂದಿಗೆ ವರದಿಯನ್ನು ಪ್ರತಿ ತ್ರೈಮಾಸಿಕದ ಕೊನೆಯಲ್ಲಿ ಸಲ್ಲಿಸತಕ್ಕದ್ದು.

17/11/22

......3

11. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಹಾಗೂ ಅದರಡಿಯಲ್ಲಿ ರಚಿಸಿರುವ ನಿಯಮಗಳನ್ನು ಕಡ್ಡಾಯವಾಗಿ ಅನುಸರಿಸತಕ್ಕದ್ದು.

ಸದರಿ ವೆಚ್ಚವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮ ಲೆಕ್ಕಶೀರ್ಷಿಕೆ: 2225-03-001-0-05-103 ರಡಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 687 ವೆಚ್ಚ-3/2022, ದಿನಾಂಕ:05.11.2022 ರನ್ವಯ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Sheenparveen

**(ಷಾಹೀನ್ ಪರ್ವೀನ್.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ), ವಿಧಾನಸೌಧ, ಬೆಂಗಳೂರು.
4. ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ ದಾವಣಗೆರೆ.
5. ಜಿಲ್ಲಾ ಅಧಿಕಾರಿ, ಹಿಂದುಳಿ ವರ್ಗಗಳ ಕಲ್ಯಾಣ ಇಲಾಖೆ, ದಾವಣಗೆರೆ ಜಿಲ್ಲೆ ದಾವಣಗೆರೆ.
6. ಖಜಾನಾಧಿಕಾರಿಗಳು, ರಾಜ್ಯಹುಜೂರ್ ಖಜಾನೆ, ಬೆಂಗಳೂರು.

**ಪ್ರತಿ:-**

1. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.